# ಜೆಎಸ್‌ಎಸ್ ಶಿಕ್ಷಣ ಮಹಾವಿದ್ಯಾಲಯ

**ಕೌಡಳ್ಳಿ, ಸಕಲೇಸಪುರ ತಾಲ್ಲೂಕು, ಹಾಸನ ಜಿಲ್ಲೆ**

---

## "ರಾಷ್ಟ್ರೀಯ ಯುವ ದಿನ ಆಚರಣೆಯ ವರದಿ"

ಸಕಲೇಶಪುರ ಜೆಎಸ್‌ಎಸ್ ಶಿಕ್ಷಣ ಮಹಾವಿದ್ಯಾಲಯದಲ್ಲಿ ದಿನಾಂಕ 12-01-2023 ರ ಗುರುವಾರ ಮಧ್ಯಾಹ್ನ 2.30 ರಿಂದ 4.30 ರವರೆಗೆ ಸ್ವಾಮಿ ವಿವೇಕಾನಂದರ ಜನ್ಮದಿನದ ಪ್ರಯುಕ್ತ "ರಾಷ್ಟ್ರೀಯ ಯುವ ದಿನ" ಕಾರ್ಯಕ್ರಮವನ್ನು ಆಚರಿಸಲಾಯಿತು.

ಕಾರ್ಯಕ್ರಮವನ್ನು ಪ್ರಶಿಕ್ಷಣಾರ್ಥಿ ಕುಮಾರಿ ದೀಪ ಕೆ.ಎಸ್ ರವರ ಪ್ರಾರ್ಥನೆಯೊಂದಿಗೆ ಪ್ರಾರಂಭಿಸಲಾಯಿತು.

ಕಾರ್ಯಕ್ರಮದಲ್ಲಿ ಮುಖ್ಯ ಭಾಷಣಕಾರರಾಗಿ ಆಗಮಿಸಿದ ರಾಷ್ಟ್ರೀಯ ಸ್ವಯಂ ಸೇವಕ ಸಂಘದ ಹಾಸನ ಜಿಲ್ಲಾ ಕಾರ್ಯವಾಹ ಶ್ರೀ ನವೀನ್ ಕುಮಾರ ರವರು ಮಾತನಾಡುತ್ತಾ ಸ್ವಾಮಿ ವಿವೇಕಾನಂದರನ್ನು ಭಾರತ ದೇಶ ಮಾತ್ರವಲ್ಲ ಇಡೀ ಜಗತ್ತು ಬಹಳ ಗೌರವಾದರಗಳಿಂದ ನೆನಪಿಸಿಕೊಳ್ಳುತ್ತದೆ. ಸ್ವಾಮಿ ವಿವೇಕಾನಂದರ ಜೀವನ ಸಾಧನೆ ಯುವಕರಿಗೆ ಪ್ರೇರಣೆಯಾಗಬೇಕು ಹಾಗೂ ವಿವೇಕಾನಂದರ ಬೋಧನೆಗಳು ಬಹಳಷ್ಟು ಯುವ ಭಾರತೀಯರಿಗೆ ಸ್ಫೂರ್ತಿ ನೀಡಿದೆ. 19 ನೇ ಶತಮಾನದಲ್ಲಿ ಆಧ್ಯಾತ್ಮಿಕ ಜಾಗೃತಿಯನ್ನು ತಂದಿತು. ಆದ್ದರಿಂದ ಅವರ ಜನ್ಮದಿನವನ್ನು ರಾಷ್ಟ್ರೀಯ ಯುವ ದಿನವಾಗಿ ಆಚರಿಸಲಾಗುತ್ತದೆ. ಅತೀಂದ್ರಿಯ ಮತ್ತು ಯೋಗಿ ರಾಮಕೃಷ್ಣ ಪರಮಹಂಸರ ಮಾರ್ಗದರ್ಶನದಲ್ಲಿ ಪುರಾತನ ಹಿಂದೂ ಧರ್ಮಗ್ರಂಥಗಳ ಮೂಲಕ ಭಾರತೀಯ ತತ್ವಶಾಸ್ತ್ರವನ್ನು ಮರುಶೋಧಿಸಿದ ಮತ್ತು ಅದನ್ನು ಮುಖ್ಯವಾಹಿನಿಯ ಭಾರತೀಯ ಚಿಂತನೆಗೆ ತಂದ ಭಾರತದ ಪ್ರಮುಖ ಚಿಂತಕರಲ್ಲಿ ಒಬ್ಬರು ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಕಾಲೇಜಿನ ಪ್ರಾಂಶುಪಾಲರಾದ ಡಾ. ನಂಜುಂಡಪ್ಪ ಎಸ್ ರವರು ಮಾತನಾಡುತ್ತಾ ಸ್ವಾಮಿ ವಿವೇಕಾನಂದರು 1893 ರಲ್ಲಿ ವಿಶ್ವ ಧರ್ಮಗಳ ಸಂಸತ್ತಿನಲ್ಲಿ ಭಾರತ ಮತ್ತು ಹಿಂದೂ ಧರ್ಮವನ್ನು ಸ್ವಾಮೀಜಿ ಪ್ರತಿನಿಧಿಸಿದ್ದರು ಹಾಗೂ ಸ್ವಾಮಿ ವಿವೇಕಾನಂದರ ಜೀವನ ಮತ್ತು ಕಾರ್ಯ ಹಲವಾರು ವರ್ಷಗಳಿಂದ ಲಕ್ಷಾಂತರ ಜನರಿಗೆ ಸ್ಫೂರ್ತಿ ನೀಡಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಪ್ರಶಿಕ್ಷಣಾರ್ಥಿಗಳಾದ ಶ್ರೀ ಆಂಜನೇಯ, ಶ್ರೀ ಶರಣ್ ಕುಮಾರ್, ಕುಮಾರಿ ಫಾತಿಮಾ ಕೌಸರ್ ಹಾಗೂ ಕುಮಾರಿ ಅಕ್ಷತಾ ಸಿ.ಎಸ್ ರವರು ಸ್ವಾಮಿ ವಿವೇಕಾನಂದರ ಕುರಿತಾಗಿ ವಿಚಾರ ಮಂಡಿಸಿದರು.

ಕಾರ್ಯಕ್ರಮದ ಪೂರ್ವಭಾವಿಯಾಗಿ ಸ್ವಾಮಿ ವಿವೇಕಾನಂದರ ಜೀವನದ ಕುರಿತಾಗಿ ನಡೆಸಿದ ಕಿರು ಪರೀಕ್ಷೆಯಲ್ಲಿ ಉತ್ತೀರ್ಣರಾದ ಶ್ರೀ ಅಕ್ಷಯ್ ಜೆ.ಆರ್ ಹಾಗೂ ಶ್ರೀ ಅಮೃತ ಎನ್.ಎಂ ರವರಿಗೆ ಪ್ರಥಮ

ಮತ್ತು ಶ್ರೀ ನವೀನ್ ಕುಮಾರ ಹಾಗೂ ಕುಮಾರಿ ಶಮಂತ ಸಿ.ಎಸ್ ರವರಿಗೆ ದ್ವಿತೀಯ ಬಹುಮಾನ ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಸಂಯೋಜನಾಧಿಕಾರಿಗಳಾದ ಶ್ರೀ ಮಂಜುನಾಥ್ ಆರ್, ಮಾನವಿಕ ಸಂಘದ ಸಂಚಾಲಕರಾದ ಶ್ರೀ ನಂಜುಂಡಸ್ವಾಮಿ ಕೆ.ಎಸ್, ಸಿಬ್ಬಂದಿ ವರ್ಗದವರು ಹಾಗೂ ಪ್ರಶಿಕ್ಷಣಾರ್ಥಿಗಳು ಉಪಸ್ಥಿತರಿದ್ದರು.

ಕಾರ್ಯಕ್ರಮವನ್ನು ಪ್ರಶಿಕ್ಷಣಾರ್ಥಿ ಕುಮಾರಿ ಪೂರ್ವಿಕ ಕೆ.ಆರ್ ರವರು ಸ್ವಾಗತಿಸಿ, ಕುಮಾರಿ ಬಿಂದು ರವರು ವಂದಿಸುವುದರೊಂದಿಗೆ ಪ್ರಶಿಕ್ಷಣಾರ್ಥಿ ಕುಮಾರಿ ದೀಪ್ತಿ ರವರು ನಿರೂಪಿಸಿದರು.








PRINCIPAL
J.S.S. Institute of Educatio
P.B. 26, SAKALESHPUR-573 134
Hassan Dist